## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಲಸಂಪನ್ಮೂಲ ಇಲಾಖೆಯಲ್ಲಿ ಕಾಮಗಾರಿಗಳ ಗುಣಮಟ್ಟ ನಿಯಂತ್ರಣಕ್ಕಾಗಿ ಪ್ರತ್ಯೇಕವಾಗಿ ಮುಖ್ಯ ಇಂಜಿನಿಯರ್ (ಗುಣ ನಿಯಂತ್ರಣ ) ಹುದ್ದೆಯನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:**

1. ಮಾನ್ಯ ಮುಖ್ಯ ಮಂತ್ರಿಯವರ ತಾಂತ್ರಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಸಿಎಂ/ತಾಂಸ/76/2019 ದಿನಾಂಕ: 28.06.2019.
2. ಅಧೀಕ್ಷಕ ಇಂಜಿನಿಯರ್ ರವರ ಮನವಿ ದಿನಾಂಕ: 16.07.2019.

********

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ: 28.06.2019ರಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ತಾಂತ್ರಿಕ ಸಲಹೆಗಾರರು ಮಾನ್ಯ ಜಲ ಸಂಪನ್ಮೂಲ ಸಚಿವರಿಗೆ ಸಲ್ಲಿಸಿರುವ ಟಿಪ್ಪಣಿಯಲ್ಲಿ ಜಲ ಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿರುವ ಕರ್ನಾಟಕ ನೀರಾವರಿ ನಿಗಮ, ಕಾವೇರಿ ನೀರಾವರಿ ನಿಗಮ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಇವುಗಳ ಅಧೀನದಲ್ಲಿ ಕಾಮಗಾರಿಯ ಗುಣನಿಯಂತ್ರಣಕ್ಕಾಗಿ ಕಾರ್ಯಪಾಲಕ ಇಂಜಿನಿಯರ್ ವೃಂದದ ಹುದ್ದೆಗಳು ಇರುತ್ತವೆ. ಈ ಗುಣನಿಯಂತ್ರಣ ವಿಭಾಗಗಳು ಕಾಮಗಾರಿಗಳ ನಿರ್ಮಾಣ ಮೇಲ್ವಿಚಾರಣೆಯನ್ನು ನಡೆಸುತ್ತಿರುವ ಮುಖ್ಯ ಇಂಜಿನಿಯರ್ ರವರ ಅಧೀನಕ್ಕೆ ಒಳಪಟ್ಟಿರುತ್ತವೆ. ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳಲು ಗುಣನಿಯಂತ್ರಣ ವಿಭಾಗಗಳು ಸ್ವತಂತ್ರವಾಗಿ ಕಾರ್ಯನಿರ್ವಹಿಸುವುದು ಅವಶ್ಯವಾಗಿರುತ್ತದೆ. ಲೋಕೋಪಯೋಗಿ ಇಲಾಖೆಯಲ್ಲಿನ ಕಾಮಗಾರಿಗಳ ಗುಣಮಟ್ಟವನ್ನು ಆಗಿಂದಾಗ್ಗೆ ಪರಿಶೀಲಿಸಿ ವರದಿ ನೀಡಲು ಪ್ರತ್ಯೇಕವಾದ ಮುಖ್ಯ ಇಂಜಿನಿಯರ್ ಹುದ್ದೆ ಇರುತ್ತದೆ. ಇದೇ ಮಾದರಿಯಲ್ಲಿಯೇ ಜಲ ಸಂಪನ್ಮೂಲ ಇಲಾಖೆಯಲ್ಲಿಯೂ ಕೂಡ ಗುಣ ನಿಯಂತ್ರಣಕ್ಕಾಗಿ ಪ್ರತ್ಯೇಕ ಮುಖ್ಯ ಇಂಜಿನಿಯರ್ ರವರ ಹುದ್ದೆಯನ್ನು ಸೃಷ್ಟಿಸಿ, ನಾಲ್ಕೂ ನಿಗಮಗಳಲ್ಲಿನ ಕಾಮಗಾರಿಗಳ ಗುಣ ಮಟ್ಟವನ್ನು ಪರಿಶೀಲಿಸಿ ನೇರವಾಗಿ ಸಚಿವರಿಗೆ ವರದಿ ನೀಡುವ ಅಧಿಕಾರ ಕೊಡುವುದು ಸೂಕ್ತವೆಂದು ತಿಳಿಸಿರುತ್ತಾರೆ.

ಅಧೀಕ್ಷಕ ಇಂಜಿನಿಯರ್‌ಗಳು ಸರ್ಕಾರಕ್ಕೆ ಸಲ್ಲಿಸಿರುವ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 16.07.2019ರ ಮನವಿಯಲ್ಲಿ ಪ್ರಸ್ತುತ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಕಛೇರಿಯಲ್ಲಿನ ತಾಂತ್ರಿಕ ನಿರ್ದೇಶಕರ ಹುದ್ದೆಯನ್ನು ಅಧೀಕ್ಷಕ ಇಂಜಿನಿಯರ್ ರವರ ಹುದ್ದೆಯಿಂದ ಮುಖ್ಯ ಇಂಜಿನಿಯರ್ ಹುದ್ದೆಗೆ ಸರ್ಕಾರದ ಆದೇಶ ಸಂಖ್ಯೆ: ಲೋಇ 32 ಕೆಬಿಎನ್ 2003, ದಿನಾಂಕ: 12.05.2013ರಲ್ಲಿ ಮೇಲ್ದರ್ಜೆಗೆ ಏರಿಸಿದ್ದು, ಅದರಂತೆ ಈ ಹುದ್ದೆಯಲ್ಲಿ ಮುಖ್ಯ ಇಂಜಿನಿಯರ್ ರವರು ಕಾರ್ಯನಿರ್ವಹಿಸುತ್ತಿರುತ್ತಾರೆ. ಜಲ ಸಂಪನ್ಮೂಲ ಇಲಾಖೆಯ ಇತರೆ ಮೂರು ನಿಗಮಗಳಾದ ಕರ್ನಾಟಕ ನೀರಾವರಿ ನಿಗಮ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳ ಕಛೇರಿಯಲ್ಲಿ ತಾಂತ್ರಿಕ ನಿರ್ದೇಶಕರುಗಳ ಹುದ್ದೆಗಳಿದ್ದು, ಈ ಹುದ್ದೆಗಳಲ್ಲಿ ಹಾಲಿ ಅಧೀಕ್ಷಕ ಇಂಜಿನಿಯರ್ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಮೇಲಿನ ಮೂರು ನಿಗಮಗಳಲ್ಲಿ ತಾಂತ್ರಿಕ ನಿರ್ದೇಶಕರ ಹುದ್ದೆಯು ಬಹಳ ಪ್ರಮುಖ ಹುದ್ದೆಯಾಗಿದ್ದು ಎಲ್ಲಾ ತಾಂತ್ರಿಕ ವಿಷಯಗಳ ಬಗ್ಗೆ ಸಮಗ್ರ ಮಾಹಿತಿಯನ್ನು ಒಳಗೊಂಡ ಮುಖ್ಯ ಇಂಜಿನಿಯರ್ ಹುದ್ದೆಯ ಅವಶ್ಯಕತೆ ಇರುವುದರಿಂದ, ಈಗಾಗಲೇ ಕಾವೇರಿ ನೀರಾವರಿ ನಿಗಮದಲ್ಲಿ ತಾಂತ್ರಿಕ ನಿರ್ದೇಶಕರ ಹುದ್ದೆಯನ್ನು ಮುಖ್ಯ ಇಂಜಿನಿಯರ್ ಹುದ್ದೆಗೆ ಮೇಲ್ದರ್ಜೆಗೆ ಏರಿಸಿರುವ ಮಾದರಿಯಲ್ಲಿಯೇ, ಕರ್ನಾಟಕ ನೀರಾವರಿ ನಿಗಮ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರುಗಳ ಕಛೇರಿಯಲ್ಲಿ ತಾಂತ್ರಿಕ ನಿರ್ದೇಶಕರ ಹುದ್ದೆಯನ್ನು ಮುಖ್ಯ ಇಂಜಿನಿಯರ್ ಹುದ್ದೆಗೆ ಮೇಲ್ದರ್ಜೆಗೆ ಉನ್ನತೀಕರಿಸುವಂತೆ ಕೋರಿರುತ್ತಾರೆ.

ಕಾವೇರಿ ನೀರಾವರಿ ನಿಗಮ ಹೊರತುಪಡಿಸಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಕರ್ನಾಟಕ ನೀರಾವರಿ ನಿಗಮ ನಿಯಮಿತ ಹಾಗೂ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಈ ಮೂರು ನಿಗಮಗಳಲ್ಲಿ ಮಂಜೂರಾದ ಅಧೀಕ್ಷಕ ಅಭಿಯಂತರರ ಹುದ್ದೆ ಇದ್ದು ಸದರಿ ಹುದ್ದೆಗಳನ್ನು ಮೇಲ್ದರ್ಜೆಗೇರಿಸಿದಲ್ಲಿ ನಿಗಮಗಳ ವ್ಯಾಪ್ತಿಯಲ್ಲಿ ಕೈಗೊಳ್ಳುತ್ತಿರುವ ಎಲ್ಲಾ ಕಾಮಗಾರಿಗಳನ್ನು ತಾಂತ್ರಿಕವಾಗಿ ಆಗಿಂದ್ಯಾಗೆ ಪರಿವೀಕ್ಷಣೆ ನಡೆಸಿ ಸದರಿ ಕಾಮಗಾರಿಗಳ ಗುಣಮಟ್ಟವನ್ನು ಉನ್ನತೀಕರಿಸಲು ಅನುಕೂಲವಾಗುತ್ತದೆ ಹಾಗೂ ವ್ಯವಸ್ಥಾಪಕ ನಿರ್ದೇಶಕರಿಗೆ ನಿಗಮದ

..2..

ಪ್ರಮುಖ ಕಾಮಗಾರಿಗಳ ಅನುಮೋದನೆಯನ್ನು ಮಂಡಳಿ ಸಭೆಯಲ್ಲಿ ಮಂಡಿಸಲು ಹಾಗೂ ಅನುಮೋದ ಪಡೆಯಲು, ತಾಂತ್ರಿಕ ಸಲಹೆ ನೀಡಲು ಸಹಕಾರಿಯಾಗುತ್ತದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಲ ಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮಗಳಲ್ಲಿನ ವ್ಯವಸ್ಥಾಪಕ ನಿರ್ದೇಶಕ ಕಛೇರಿಗಳಲ್ಲಿನ 03 ತಾಂತ್ರಿಕ ನಿರ್ದೇಶಕರ (ಅಧೀಕ್ಷಕ ಇಂಜಿನಿಯರ್) ಹುದ್ದೆಗಳನ್ನು ಮುಖ್ಯ ಇಂಜಿನಿಯರ್ ಹುದ್ದೆಗೆ ಉನ್ನತೀಕರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 82 ಸೇಎಸು 2019,</u>**

**<u>ಬೆಂಗಳೂರು ದಿನಾಂಕ: 16.10.2019.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಜಲ ಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮ, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮತ್ತು ವಿಶ್ವೇಶ್ವರಯ್ಯ ಜಲ ನಿಗಮಗಳಲ್ಲಿನ ವ್ಯವಸ್ಥಾಪಕ ನಿರ್ದೇಶಕರ ಕಛೇರಿಗಳಲ್ಲಿ ಮಂಜೂರಾದ ಅಧೀಕ್ಷಕ ಅಭಿಯಂತರ ವೃಂದದ ತಾಂತ್ರಿಕ ನಿರ್ದೇಶಕರ ಹುದ್ದೆಗಳನ್ನು ಆಡಳಿತದ ಹಿತದೃಷ್ಟಿಯಿಂದ ಜಲಸಂಪನ್ಮೂಲ ಇಲಾಖೆಯಲ್ಲಿನ 48 ಅಧೀಕ್ಷಕ ಇಂಜಿನಿಯರ್ ಹುದ್ದೆಗಳ ಪೈಕಿ 03 ಹುದ್ದೆಗಳನ್ನು ಒಂದು ವರ್ಷದ ಅವಧಿಗೆ ತಾತ್ಕಾಲಿಕವಾಗಿ ಮುಖ್ಯ ಇಂಜಿನಿಯರ್ (ವೇತನ ಶ್ರೇಣಿ ರೂ. 90500-141300) ಹುದ್ದೆಗೆ ಉನ್ನತೀಕರಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 456 ಆಕೋ-1/2019 ದಿನಾಂಕ: 18.09.2019ರಲ್ಲಿ ನೀಡಿರುವ ಸಹಮತದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16.10.19

(ಕೆ ಎಲ್ ಪ್ರಸಾದ್)
ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).

16/10

**ಇವರಿಗೆ:-**

ಪ್ರಧಾನ ಮಹಾಲೇಖಪಾಲರು(ಜಿ&ಎಸ್.ಎಸ್.ಎ)/(ಈ & ಆರ್.ಎಸ್.ಎ)/(ಎ&ಇ), ಕರ್ನಾಟಕ, ಬೆಂಗಳೂರು.

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್.ಎಸ್.ಎ)/(ಈ & ಆರ್.ಎಸ್.ಎ)/(ಎ&ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು-560009.
3. ವ್ಯವಸ್ಥಾಪಕ ನಿರ್ದೇಶಕರು, ವಿ.ಜ.ನಿ.ನಿ., ಬೆಂಗಳೂರು/ಚಿತ್ರದುರ್ಗ.
4. ವ್ಯವಸ್ಥಾಪಕ ನಿರ್ದೇಶಕರು, ಕೃ.ಭಾ.ಜ.ನಿ.ನಿ., ಬೆಂಗಳೂರು/ಆಲಮಟ್ಟಿ.
5. ವ್ಯವಸ್ಥಾಪಕ ನಿರ್ದೇಶಕರು, ಕಾ.ನೀ.ನಿ.ನಿ ಬೆಂಗಳೂರು/ಮೈಸೂರು.
6. ವ್ಯವಸ್ಥಾಪಕ ನಿರ್ದೇಶಕರು, ಕ.ನೀ.ನಿನಿ ಬೆಂಗಳೂರು/ಧಾರವಾಡ.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಬೆಂಗಳೂರು.
8. ನಿರ್ದೇಶಕರು, ಕಾಡಾ, ಬೆಂಗಳೂರು.
9. ಎಲ್ಲಾ ಮುಖ್ಯ ಇಂಜಿನಿಯರ್‌ಗಳು, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
11. ಹೆಚ್ಚುವರಿ ನಿರ್ದೇಶಕರು ಹಾಗೂ ಕಾರ್ಯಕಾರಿ ಮುಖ್ಯಸ್ಥರು, ಖಜಾನೆ-2, ಖಜಾನೆ ಗಣಕ ಜಾಲ ನಿರ್ವಹಣೆ ಕೇಂದ್ರ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
12. ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆಯ ಇವರ ಆಪ್ತ ಕಾರ್ಯದರ್ಶಿಗಳು.
13. ಸರ್ಕಾರದ ಉಪಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆಯ ಇವರ ಆಪ್ತ ಕಾರ್ಯದರ್ಶಿಗಳು
14. ಸಂಬಂಧಿಸಿದ ಅಧಿಕಾರಿಗಳಿಗೆ.
15. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.

*****